19310

**ಕರ್ನಾಟಕ ಸರ್ಕಾರದ ನಡವಳಿಗಳು**

ವಿಷಯ:- ರಾಜ್ಯದಲ್ಲಿನ ಕೆಲವು ಇಂಜಿನಿಯರಿಂಗ್ ಕಾಲೇಜುಗಳಿಗೆ 2017-18ನೇ ಸಾಲಿಗೆ ಮತೀಯ : ಭಾಷಾ ಅಲ್ಪಸಂಖ್ಯಾತ ಸ್ಥಾನಮಾನ ಮುಂದುವರೆಸುವ ಬಗ್ಗೆ.

**ಓದಲಾಗಿದೆ:**

1) ಸರ್ಕಾರಿ ಆದೇಶ ಸಂಖ್ಯೆ: ಇಡಿ 95 ಟಿಇಸಿ 2016, ದಿನಾಂಕ:06.07.2016.
2) ನಿರ್ದೇಶಕರು, ತಾಂತ್ರಿಕ ಶಿಕ್ಷಣ ಇಲಾಖೆ ಇವರ ಪತ್ರ ಸಂಖ್ಯೆ: ಡಿಟಿಇ 06 ಎಸಿಎಂ (1) 2017-18, ದಿನಾಂಕ:24.05.2017.

**ಪ್ರಸ್ತಾವನೆ:-**

ಮೇಲೆ ಓದಲಾದ ಕ್ರಮಸಂಖ್ಯೆ (1)ರ ಸರ್ಕಾರಿ ಆದೇಶದಲ್ಲಿ ರಾಜ್ಯದಲ್ಲಿನ 17 ಖಾಸಗಿ ಇಂಜಿನಿಯರಿಂಗ್ ಕಾಲೇಜುಗಳಿಗೆ 2016-17 ನೇ ಶೈಕ್ಷಣಿಕ ಸಾಲಿಗೆ ಒಂದು ವರ್ಷದ ಅವಧಿಗೆ ಕೆಲವೊಂದು ಷರತ್ತುಗಳನ್ನು ವಿಧಿಸಿ ಭಾಷಾ : ಮತೀಯ ಅಲ್ಪಸಂಖ್ಯಾತ ಸ್ಥಾನಮಾನವನ್ನು ನೀಡಿ ಮುಂದುವರೆಸಲಾಗಿತ್ತು.

ಮೇಲೆ ಓದಲಾದ ಕ್ರಮಸಂಖ್ಯೆ (2)ರ ಪತ್ರದಲ್ಲಿ ನಿರ್ದೇಶಕರು, ತಾಂತ್ರಿಕ ಶಿಕ್ಷಣ ಇಲಾಖೆ, ಬೆಂಗಳೂರು ರವರು ಈ ಕೆಳಕಂಡ ಖಾಸಗಿ ಇಂಜಿನಿಯರಿಂಗ್ ಕಾಲೇಜುಗಳು 2016-17 ನೇ ಸಾಲಿನಲ್ಲಿ ನಿಗಧಿತ ಪ್ರಮಾಣವನ್ನು ಅಲ್ಪಸಂಖ್ಯಾತ ವಿದ್ಯಾರ್ಥಿಗಳಿಗೆ ಪ್ರವೇಶ ನೀಡಿರುವುದರಿಂದ ಸದರಿ ಕಾಲೇಜುಗಳಿಗೆ 2017-18 ನೇ ಸಾಲಿಗೆ ಭಾಷಾ : ಮತೀಯ ಅಲ್ಪಸಂಖ್ಯಾತ ಸ್ಥಾನಮಾನ ಮುಂದುವರೆಸುವಂತೆ ಕೋರಿರುತ್ತಾರೆ.

ACM

**ಮತೀಯ ಅಲ್ಪಸಂಖ್ಯಾತ ಸಂಸ್ಥೆಗಳು:-**

1. ಅಂಜುಮಾನ್ ಇಂಜಿನಿಯರಿಂಗ್ ಕಾಲೇಜು, ಬಂಟ್ವಾಳ (ಮುಸ್ಲಿಂ)
2. ಬಾಹುಬಲಿ ಕಾಲೇಜ್ ಆಫ್ ಇಂಜಿನಿಯರಿಂಗ್, ಶ್ರವಣಬೆಳಗೊಳ (ಜೈನ್)
3. ಗೌಸಿಯಾ ಇಂಜಿನಿಯರಿಂಗ್ ಕಾಲೇಜ್, ರಾಮನಗರ (ಮುಸ್ಲಿಂ)
4. ಗುರುನಾನಕ್ ದೇವ್ ಇಂಜಿನಿಯರಿಂಗ್ ಕಾಲೇಜ್, ಬೀದರ್ (ಸಿಖ್)
5. ಹೆಚ್.ಕೆ.ಬಿ.ಕೆ ಕಾಲೇಜ್ ಆಫ್ ಇಂಜಿನಿಯರಿಂಗ್, ಬೆಂಗಳೂರು (ಮುಸ್ಲಿಂ)
6. ಖಾಜಾ ಬಂದಾ ನವಾಜ್, ಕಾಲೇಜ್ ಆಫ್ ಇಂಜಿನಿಯರಿಂಗ್, ಗುಲಬರ್ಗಾ(ಮುಸ್ಲಿಂ)
7. ಕೆ.ಸಿ.ಟಿ. ಇಂಜಿನಿಯರಿಂಗ್ ಕಾಲೇಜು, ಗುಲ್ಬರ್ಗಾ (ಮುಸ್ಲಿಂ)
8. ಪಿ.ಎ. ಇಂಜಿನಿಯರಿಂಗ್ ಕಾಲೇಜು, ಕೈರಂಗಲ್, ಮಂಗಳೂರು (ಮುಸ್ಲಿಂ)
9. ಸೇಂಟ್ ಜೋಸೆಫ್ ಇಂಜಿನಿಯರಿಂಗ್ ಕಾಲೇಜು, ಮಂಗಳೂರು (ಕ್ರಿಶ್ಚಿಯನ್)
10. ಸೀಕ್ಯಾಬ್ ಇನ್ಸ್‌ಟಿಟ್ಯೂಟ್ ಆಫ್ ಇಂಜಿನಿಯರಿಂಗ್ ಅಂಡ್ ಟೆಕ್ನಾಲಜಿ, ಬಿಜಾಪುರ (ಮುಸ್ಲಿಂ)
11. ಬೇರಿಸ್ ಇನ್ಸ್‌ಸಿಟ್ಯೂಟ್ ಆಫ್ ಟೆಕ್ನಾಲಜಿ, ಮಂಗಳೂರು(ಮುಸ್ಲಿಂ)

JD(Plan)/ACM

**ಭಾಷಾ ಅಲ್ಪಸಂಖ್ಯಾತ ಸಂಸ್ಥೆಗಳು:-**

1. ಎಂ.ವಿ.ಜೆ. ಕಾಲೇಜ್ ಆಫ್ ಇಂಜಿನಿಯರಿಂಗ್, ಬೆಂಗಳೂರು (ತಮಿಳು)
2. ಶ್ರೀ ಧರ್ಮಸ್ಥಳ ಮುಂಜುನಾಥೇಶ್ವರ ಇಂಜಿನಿಯರಿಂಗ್ ಕಾಲೇಜು, ಧಾರವಾಡ (ತುಳು)
3. ಕೆನರಾ ಇಂಜಿನಿಯರಿಂಗ್ ಕಾಲೇಜು, ಬಂಟ್ವಾಳ (ಕೊಂಕಣಿ)
4. ನ್ಯೂ ಹಾರಿಜಾನ್ ಇಂಜಿನಿಯರಿಂಗ್ ಕಾಲೇಜು, ಬೆಂಗಳೂರು (ಸಿಂದಿ)
5. ಆಕ್ಸ್‌ಫರ್ಡ್ ಇಂಜಿನಿಯರಿಂಗ್ ಕಾಲೇಜು, ಬೆಂಗಳೂರು (ತೆಲುಗು)
6. ಎಸ್.ಡಿ.ಎಂ. ಇನ್ಸ್‌ಟಿಟ್ಯೂಟ್ ಆಫ್ ಟೆಕ್ನಾಲಜಿ, ಉಜಿರೆ, ದಕ್ಷಿಣ ಕನ್ನಡ (ತುಳು).

7/3/19 @12.00pm. R 2262 07/3/19

ಪ್ರಕರಣದಲ್ಲಿ ಒದಗಿಬಂದ ದಾಖಲೆಗಳನ್ನು ಸರ್ಕಾರವು ಕೂಲಂಕಷವಾಗಿ ಪರಿಶೀಲಿಸಿ, ಮೇಲೆ ತಿಳಿಸಿರುವ ಇಂಜಿನಿಯರಿಂಗ್ ಕಾಲೇಜುಗಳು ಅಧಿಸೂಚನೆ ಸಂಖ್ಯೆ: ಇಡಿ 131 ಟಿಪಿಇ 2014, ದಿನಾಂಕ:20.08.2014ರ ನಿಯಮಗಳಲ್ಲಿ ವಿಧಿಸಲಾದ ಷರತ್ತುಗಳನ್ನು ತಾಂತ್ರಿಕ ಶಿಕ್ಷಣ ನಿರ್ದೇಶಕರು ಪೂರೈಸಿರುವುದಾಗಿ ತಿಳಿಸಿ, ಸದರಿ ಸಂಸ್ಥೆಗಳಿಗೆ ಭಾಷಾ : ಮತೀಯ ಅಲ್ಪಸಂಖ್ಯಾತ ಸ್ಥಾನಮಾನವನ್ನು ಮುಂದುವರೆಸುವ ಬಗ್ಗೆ ಶಿಫಾರಸ್ಸು ಮಾಡಿರುವಂತೆ, ಸದರಿ ಸಂಸ್ಥೆಗಳಿಗೆ 2017-18ನೇ ಶೈಕ್ಷಣಿಕ ಸಾಲಿಗೆ ಭಾಷಾ : ಮತೀಯ ಅಲ್ಪಸಂಖ್ಯಾತ ಸ್ಥಾನಮಾನವನ್ನು ಮುಂದುವರೆಸುವ ಬಗ್ಗೆ ನಿರ್ಣಯಿಸಿ, ಈ ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರಿ ಆದೇಶ ಸಂಖ್ಯೆ: ಇಡಿ 107 ಟಿಇಸಿ 2017**
**ಬೆಂಗಳೂರು, ದಿನಾಂಕ: 06ನೇ ಮಾರ್ಚ್ 2019**

ಪ್ರಸ್ತಾವನೆಯಲ್ಲಿ ವಿವರಿಸಿರುವ ಕಾರಣಗಳ ಹಿನ್ನೆಲೆಯಲ್ಲಿ, 2017-18 ನೇ ಶೈಕ್ಷಣಿಕ ಸಾಲಿಗೆ ಈ ಕೆಳಕಂಡ ಖಾಸಗಿ ಇಂಜಿನಿಯರಿಂಗ್ ಕಾಲೇಜುಗಳಿಗೆ ಭಾಷಾ / ಮತೀಯ ಅಲ್ಪಸಂಖ್ಯಾತ ಸ್ಥಾನಮಾನವನ್ನು ಕೆಳಕಂಡ ಷರತ್ತಿಗೊಳಪಡಿಸಿ ತಾತ್ಕಾಲಿಕವಾಗಿ 2017-18 ನೇ ಶೈಕ್ಷಣಿಕ ಸಾಲಿಗೆ ಮಾತ್ರ ಮುಂದುವರೆಸಲಾಗಿದೆ.

**ಮತೀಯ ಅಲ್ಪಸಂಖ್ಯಾತ ಸಂಸ್ಥೆಗಳು:-**

1. ಅಂಜುಮಾನ್ ಇಂಜಿನಿಯರಿಂಗ್ ಕಾಲೇಜು, ಬಂಟ್ವಾಳ (ಮುಸ್ಲಿಂ)
2. ಬಾಹುಬಲಿ ಕಾಲೇಜ್ ಆಫ್ ಇಂಜಿನಿಯರಿಂಗ್, ಶ್ರವಣಬೆಳಗೊಳ (ಜೈನ್)
3. ಗೌಸಿಯಾ ಇಂಜಿನಿಯರಿಂಗ್ ಕಾಲೇಜ್, ರಾಮನಗರ (ಮುಸ್ಲಿಂ)
4. ಗುರುನಾನಕ್ ದೇವ್ ಇಂಜಿನಿಯರಿಂಗ್ ಕಾಲೇಜ್, ಬೀದರ್ (ಸಿಖ್)
5. ಹೆಚ್.ಕೆ.ಬಿ.ಕೆ ಕಾಲೇಜ್ ಆಫ್ ಇಂಜಿನಿಯರಿಂಗ್, ಬೆಂಗಳೂರು (ಮುಸ್ಲಿಂ)
6. ಖಾಜಾ ಬಂದಾ ನವಾಜ್, ಕಾಲೇಜ್ ಆಫ್ ಇಂಜಿನಿಯರಿಂಗ್, ಗುಲಬರ್ಗಾ(ಮುಸ್ಲಿಂ)
7. ಕೆ.ಸಿ.ಟಿ. ಇಂಜಿನಿಯರಿಂಗ್ ಕಾಲೇಜು, ಗುಲ್ಬರ್ಗಾ (ಮುಸ್ಲಿಂ)
8. ಪಿ.ಎ. ಇಂಜಿನಿಯರಿಂಗ್ ಕಾಲೇಜು, ಕೈರಂಗಲ್, ಮಂಗಳೂರು (ಮುಸ್ಲಿಂ)
9. ಸೇಂಟ್ ಜೋಸೆಫ್ ಇಂಜಿನಿಯರಿಂಗ್ ಕಾಲೇಜು, ಮಂಗಳೂರು (ಕ್ರಿಶ್ಚಿಯನ್)
10. ಸೀಕ್ಯಾಬ್ ಇನ್ಸ್ಟಿಟ್ಯೂಟ್ ಆಫ್ ಇಂಜಿನಿಯರಿಂಗ್ ಅಂಡ್ ಟೆಕ್ನಾಲಜಿ, ಬಿಜಾಪುರ (ಮುಸ್ಲಿಂ)
11. ಬೇರಿಸ್ ಇನ್ಸ್ಟಿಟ್ಯೂಟ್ ಆಫ್ ಟೆಕ್ನಾಲಜಿ, ಮಂಗಳೂರು(ಮುಸ್ಲಿಂ)

**ಭಾಷಾ ಅಲ್ಪಸಂಖ್ಯಾತ ಸಂಸ್ಥೆಗಳು:-**

1. ಎಂ.ವಿ.ಜೆ. ಕಾಲೇಜ್ ಆಫ್ ಇಂಜಿನಿಯರಿಂಗ್, ಬೆಂಗಳೂರು (ತಮಿಳು)
2. ಶ್ರೀ ಧರ್ಮಸ್ಥಳ ಮುಂಜುನಾಥೇಶ್ವರ ಇಂಜಿನಿಯರಿಂಗ್ ಕಾಲೇಜು, ಧಾರವಾಡ (ತುಳು)
3. ಕೆನರಾ ಇಂಜಿನಿಯರಿಂಗ್ ಕಾಲೇಜು, ಬಂಟ್ವಾಳ (ಕೊಂಕಣಿ)
4. ನ್ಯೂ ಹಾರಿಜಾನ್ ಇಂಜಿನಿಯರಿಂಗ್ ಕಾಲೇಜು, ಬೆಂಗಳೂರು (ಸಿಂದಿ)
5. ಆಕ್ಸ್‌ಫರ್ಡ್ ಇಂಜಿನಿಯರಿಂಗ್ ಕಾಲೇಜು, ಬೆಂಗಳೂರು (ತೆಲುಗು)
6. ಎಸ್.ಡಿ.ಎಂ. ಇನ್ಸ್ಟಿಟ್ಯೂಟ್ ಆಫ್ ಟೆಕ್ನಾಲಜಿ, ಉಜಿರೆ, ದಕ್ಷಿಣ ಕನ್ನಡ (ತುಳು)

**ಷರತ್ತುಗಳು:-**

(01) ಮೇಲೆ ತಿಳಿಸಿದ ಕಾಲೇಜುಗಳ ಆಡಳಿತ ಮಂಡಳಿಗಳವರು ಆಡಳಿತ ಮಂಡಳಿ ಕೋಟಾದಲ್ಲಿ ಶೇ.66ರಷ್ಟು ಸೀಟುಗಳನ್ನು ಸಂಬಂಧಿಸಿದ ಭಾಷಾ : ಮತೀಯ ಅಲ್ಪಸಂಖ್ಯಾತ ವಿದ್ಯಾರ್ಥಿಗಳಿಂದ ಭರ್ತಿ ಮಾಡತಕ್ಕದ್ದು.

(02) 2016-17 ನೇ ಶೈಕ್ಷಣಿಕ ಸಾಲಿನಲ್ಲಿ ಮೇಲೆ ತಿಳಿಸಲಾದ ಕಾಲೇಜುಗಳ ಆಡಳಿತ ಮಂಡಳಿಗೆ ಲಭ್ಯವಾಗಿದ್ದ ಅಲ್ಪಸಂಖ್ಯಾತ ಸೀಟುಗಳ ಪೈಕಿ ಭರ್ತಿ ಮಾಡಲಾಗದೆ ಬಾಕಿ ಉಳಿದ ಸಂಪೂರ್ಣ ಸೀಟುಗಳನ್ನು ಕರ್ನಾಟಕ ಪರೀಕ್ಷಾ ಪ್ರಾಧಿಕಾರಕ್ಕೆ ಷರತ್ತಿಗೊಳಪಡಿಸಿ 2017-18ನೇ ಶೈಕ್ಷಣಿಕ ಸಾಲಿಗೆ ಭಾಷಾ /ಮತೀಯ ಅಲ್ಪಸಂಖ್ಯಾತ ಸ್ಥಾನಮಾನವನ್ನು ಮುಂದುವರೆಸತಕ್ಕದ್ದು.

(03) ಮೇಲ್ಕಂಡ ಷರತ್ತುಗಳ ಕಟ್ಟುನಿಟ್ಟಾಗಿ ಪಾಲಿಸದಿದ್ದಲ್ಲಿ ಮುಂದಿನ ಶೈಕ್ಷಣಿಕ ವರ್ಷದಿಂದ ಸದರಿ ಕಾಲೇಜಿಗೆ ಭಾಷಾ : ಮತೀಯ ಅಲ್ಪಸಂಖ್ಯಾತ ಸ್ಥಾನಮಾನವನ್ನು ಮುಂದುವರೆಸಲು ಪರಿಗಣಿಸಲಾಗುವುದಿಲ್ಲ.

(04) ಮುಂದಿನ ಶೈಕ್ಷಣಿಕ ಸಾಲಿಗೆ ಭಾಷಾ : ಮತೀಯ ಅಲ್ಪಸಂಖ್ಯಾತ ಸ್ಥಾನಮಾನವನ್ನು ಮುಂದುವರೆಸಬೇಕಾದಲ್ಲಿ ಈ ಆದೇಶದಲ್ಲಿ ವಿಧಿಸಿರುವ ಷರತ್ತುಗಳನ್ನು ಪೂರೈಸಿರುವ ಮಾಹಿತಿಯೊಂದಿಗೆ , ಆಯಾಯ ಇಂಜಿನಿಯರಿಂಗ್ ಕಾಲೇಜುಗಳ ಪ್ರಾಂಶುಪಾಲರಿಂದ ದೃಢೀಕರಿಸಲ್ಪಟ್ಟ ಭಾಷಾ : ಮತೀಯ ಅಲ್ಪಸಂಖ್ಯಾತರ ಕೋಟಾದಲ್ಲಿ ಪ್ರವೇಶಾತಿ ಮಾಡಿಕೊಳ್ಳಲಾದ ವಿದ್ಯಾರ್ಥಿಗಳ ಪಟ್ಟಿಯೊಂದಿಗೆ ಸರ್ಕಾರಕ್ಕೆ ಕೋರಿಕೆಯನ್ನು ಸಲ್ಲಿಸತಕ್ಕದ್ದು.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

6/3/19

(ಮನೋರಮ ಡಿ.ಸಿ)
ಸರ್ಕಾರದ ಅಧೀನ ಕಾರ್ಯದರ್ಶಿ,
ಶಿಕ್ಷಣ ಇಲಾಖೆ (ತಾಂತ್ರಿಕ)

ಗೆ:

ಸಂಕಲನಕಾರರು, ಕರ್ನಾಟಕ ರಾಜ್ಯಪತ್ರ, ಬೆಂಗಳೂರು ರವರು ಕಳುಹಿಸಿ ಇದನ್ನು ವಿಶೇಷ ರಾಜ್ಯ ಪತ್ರದಲ್ಲಿ ಪ್ರಕಟಿಸಿ ಸರ್ಕಾರಕ್ಕೆ 100 ಪ್ರತಿಗಳನ್ನು ಕಳುಹಿಸಲು ಕೋರಿದೆ.

ಪ್ರತಿ:

1. ಕುಲಪತಿಗಳು, ವಿಶ್ವೇಶ್ವರಾಯ ತಾಂತ್ರಿಕ ವಿಶ್ವವಿದ್ಯಾಲಯ, ಜ್ಞಾನಗಂಗೋತ್ರಿ, ಬೆಳಗಾಂ./ಬೆಂಗಳೂರು ವಿಶ್ವವಿದ್ಯಾಲಯ, ಬೆಂಗಳೂರು.
2. ಕಾರ್ಯನಿರ್ವಾಹಕ ನಿರ್ದೇಶಕರು, ಕರ್ನಾಟಕ ಪರೀಕ್ಷಾ ಪ್ರಾಧಿಕಾರ, 18ನೇ ಅಡ್ಡರಸ್ತೆ, ಮಲ್ಲೇಶ್ವರಂ, ಬೆಂಗಳೂರು.
3. ನಿರ್ದೇಶಕರು, ತಾಂತ್ರಿಕ ಶಿಕ್ಷಣ ಇಲಾಖೆ, ಬೆಂಗಳೂರು.
4. ಅಧ್ಯಕ್ಷರು, ಕರ್ನಾಟಕ ಅನುದಾನರಹಿತ ಖಾಸಗಿ ಇಂಜಿನಿಯರಿಂಗ್ ಕಾಲೇಜುಗಳ ಸಂಘ, ಕಾಮೆಡ್-ಕೆ ಕಛೇರಿ ಆವರಣ, 17ನೇ ಅಡ್ಡರಸ್ತೆ, ಮಲ್ಲೇಶ್ವರಂ, ಬೆಂಗಳೂರು.
5. ಅಧ್ಯಕ್ಷರು, ಕರ್ನಾಟಕ ಭಾಷಾ ಮತ್ತು ಮತೀಯ ಅಲ್ಪಸಂಖ್ಯಾತ ವೃತ್ತಿಪರ ಕಾಲೇಜುಗಳ ಸಂಘ, ಫ್ಲಾಟ್ ನಂ.143, 4ನೇ ಮಹಡಿ, ಸೂರ್ಯಮುಖಿ, ಗಾರ್ಡನ್ ಅಪಾರ್ಟ್‌ಮೆಂಟ್, #21, ವಿಠ್ಠಲ ಮಲ್ಯ ರಸ್ತೆ, ಬೆಂಗಳೂರು-560001.
6. ಎಲ್ಲಾ ಭಾಷಾ: ಮತೀಯ ಅಲ್ಪಸಂಖ್ಯಾತ ಸಂಸ್ಥೆಗಳ ಪ್ರಾಂಶುಪಾಲರುಗಳಿಗೆ (ತಾಂತ್ರಿಕ ಶಿಕ್ಷಣ ನಿರ್ದೇಶಕರ ಮುಖಾಂತರ).
7. ಎಲ್ಲಾ ವಿಶ್ವವಿದ್ಯಾಲಯಗಳ ಕುಲಸಚಿವರುಗಳಿಗೆ.
8. ಮಾನ್ಯ ಉನ್ನತ ಶಿಕ್ಷಣ ಸಚಿವರ ಆಪ್ತ ಕಾರ್ಯದರ್ಶಿ, ವಿಧಾನಸೌಧ, ಬೆಂಗಳೂರು.
9. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ, ಶಿಕ್ಷಣ ಇಲಾಖೆ (ಉನ್ನತ ಶಿಕ್ಷಣ) ರವರ ಆಪ್ತ ಕಾರ್ಯದರ್ಶಿ.
10. ಸರ್ಕಾರದ ಉಪ ಕಾರ್ಯದರ್ಶಿ, ಶಿಕ್ಷಣ ಇಲಾಖೆ (ವಿಶ್ವವಿದ್ಯಾಲಯ) ರವರ ಆಪ್ತ ಸಹಾಯಕರು.
11. ಪತ್ರಿಕಾ ಮೇಜು.
12. ಮಾಹಿತಿ ಕೇಂದ್ರ, ಶಿಕ್ಷಣ ಇಲಾಖೆ (ವೆಬ್‌ಸೈಟ್‌ನಲ್ಲಿ ಪ್ರಕಟಿಸಲು ಕೋರಿದೆ)
13. ಶಾಖಾ ರಕ್ಷಾ ಕಡತ / ಹೆಚ್ಚಿನ ಪ್ರತಿ.